ಸಮುದಾಯ ಭವನಗಳು

3244 (3649); ಶ್ರೀ ಅಖಂಡ ಶ್ರೀನಿವಾಸಮೂರ್ತಿ ಆರ್. (ಪುಲಿಕೇಶಿನಗರ)

ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ವಿವಿಧ ಸಮುದಾಯ ಭವನಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) 2014–15ನೇ ಸಾಲಿನಲ್ಲಿ ಪುಲಿಕೇಶಿನಗರ ಮತಕ್ಷೇತ್ರದ ವ್ಯಾಪ್ತಿಗೆ ಮೂರು ಡಾ॥ ಬಿ.ಆರ್.ಅಂಬೇಡ್ಕರ್ ಸಮುದಾಯ ಭವನಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಸದರಿ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು (ವಿವರ ನೀಡುವುದು):

ಈ) ಪ್ರಸ್ತಾವನೆ ಸಲ್ಲಿಸಿರುವ ಸಮುದಾಯ ಭವನಗಳನ್ನು ಮಂಜೂರು ಮಾಡಲು ಇರುವ ಅಡಚಣೆ ಏನು?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಸಮುದಾಯ ಭವನಗಳ ನಿರ್ಮಾಣಕ್ಕೆ ಮಂಜೂರಾತಿ ನೀಡಿರುವುದಿಲ್ಲ.

ಆ) ಬಂದಿರುತ್ತದೆ.

ಇ) **ಮತ್ತು ಈ)** ಸರ್ಕಾರದ ಆದೇಶ ಸಂಖ್ಯೆ ಸಕಇ/180/ಪಕವಿ/2011 ದಿನಾಂಕ 28.09.2011 ರಲ್ಲಿ ಭವನಗಳ ನಿರ್ಮಾಣಕ್ಕಾಗಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ ಸರ್ಕಾರದಿಂದ ಈ ಕೆಳಕಂಡ ಸ್ಥಳಗಳ ಎದುರಿಗೆ ನಮೂದಿಸಿರುವ ಮೊತ್ತಕ್ಕೆ ಅನುದಾನ

ಬಿಡುಗಡೆ ಮಾಡಲು ಅವಕಾಶವಿದ್ದು, ಹೆಚ್ಚುವರಿ ಅನುದಾನ ಅವಶ್ಯವಿದ್ದಲ್ಲಿ ಸ್ಥಳೀಯ ಮೂಲಗಳಿಂದ ಭರಿಸಬೇಕಾಗುತ್ತದೆ.

(₹. ಲಕ್ಷಗಳಲ್ಲಿ)

ಹೋಬಳಿ ಮಟ್ಟದಲ್ಲಿ	50.00
ತಾಲ್ಲೂಕು ಕೇಂದ್ರಸ್ಥಾನದಲ್ಲಿ	100.00
ಜಿಲ್ಲಾ ಕೇಂದ್ರಸ್ಥಾನದಲ್ಲಿ	300.00
ರಾಜ್ಯ ಮಟ್ಟದಲ್ಲಿ	500.00 ರಿಂದ ಸರ್ಕಾರ ತೀರ್ಮಾನಿಸುವ ಅನುದಾನ

ಅದರಂತೆ ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿಯ ಮಿಲ್ಲರ್ಸ್ ರಸ್ತೆಯಲ್ಲಿ ರಾಜ್ಯದ ಮಟ್ಟದ ಬೃಹತ್ ಡಾ॥ ಬಿ.ಆರ್.ಅಂಬೇಡ್ಕರ್ ಭವನವನ್ನು ನಿರ್ಮಿಸಲಾಗಿದೆ. ಆದರೆ ಬಿ.ಬಿ.ಎಂ.ಪಿ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರವಾರು ಪ್ರದೇಶದಲ್ಲಿ ಭವನ ನಿರ್ಮಿಸಲು ಮೇಲ್ಕಂಡ ಮಾರ್ಗಸೂಚಿಗಳಲ್ಲಿ ಅವಕಾಶವಿರುವುದಿಲ್ಲ. ಆದಾಗ್ಯೂ 2014–15ನೇ ಸಾಲಿನಲ್ಲಿ ಮಾನ್ಯ ಶಾಸಕರು, ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರರವರು ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿನ ಪುಲಿಕೇಶಿನಗರ ವಿಧಾನ ಸಭಾ ಕ್ಷೇತ್ರದ 7 ಸ್ಥಳಗಳಲ್ಲಿ ಡಾ॥ ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.